## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 734(831) |
| ಮಾನ್ಯ ಸದಸ್ಯರ ಹೆಸರು: | ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು: | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |
| ಉತ್ತರಿಸಬೇಕಾದ ದಿನಾಂಕ: | 16.12.2024. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2016ರ ಪೂರ್ವದಲ್ಲಿ 1 ರಿಂದ 7ನೇ ತರಗತಿಗಳಿಗೆ ನೇಮಕಗೊಂಡ PST ವೃಂದದ ಶಿಕ್ಷಕರನ್ನು GPT (6-8) ವೃಂದಕ್ಕೆ ಬಡ್ತಿ ನೀಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ; (ಮಾಹಿತಿ ನೀಡುವುದು). | 2016 ಕ್ಕಿಂತ ಮೊದಲು ನೇಮಕಗೊಂಡಿರುವ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರು (6 ರಿಂದ 8) ಎಂದು ಪದನಾಮೀಕರಿಸಿ ಸೇವಾ ಜೇಷ್ಠತೆಯೊಂದಿಗೆ ಜಿಪಿಟಿ ವೃಂದದಲ್ಲಿ ವಿಲೀನಗೊಳಿಸಲು ವಿಶೇಷ ಪ್ರಕರಣವೆಂದು ಪರಿಗಣಿಸಲು ಕೋರಿರುತ್ತಾರೆ. ಸದರಿ ಬೇಡಿಕೆಯನ್ನು ಪರಿಗಣಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| ಆ) | ಈ ಕುರಿತು ಅಧ್ಯಯನ ಮಾಡಿ ವರದಿ ಸಲ್ಲಿಸಲು ಉನ್ನತಮಟ್ಟದ ಸಮಿತಿ ರಚನೆ ಆಗಿದ್ದು, ಅದು ವರದಿ ಸಲ್ಲಿಸಿದೆಯೇ? (ವಿವರವಾದ ಮಾಹಿತಿ ನೀಡುವುದು). | 2016ರ ಪೂರ್ವದಲ್ಲಿ ನೇಮಕಗೊಂಡಿರುವ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಬಡ್ತಿ ನೀಡುವ ಕುರಿತಂತೆ ಹಾಗೂ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮನವಿ/ಬೇಡಿಕೆಗಳನ್ನು ಆಧರಿಸಿ ಅಧ್ಯಯನ ಮಾಡಿ ವರದಿ ನೀಡಲು ಸರ್ಕಾರದ ಆದೇಶ ಸಂಖ್ಯೆ: ಇಪಿ 370 ಪಿಬಿಎಸ್ 2024, ದಿನಾಂಕ: 23-09-2024ರನ್ವಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯು ಈಗಾಗಲೇ 02 ಬಾರಿ ಸಭೆ ನಡೆಸಿದ್ದು, ಬೇಡಿಕೆಗಳ ಸಾಧಕ ಬಾಧಕಗಳ ಬಗ್ಗೆ ಹಾಗೂ ನಿಯಮಗಳಲ್ಲಿನ ಅವಕಾಶಗಳ ಕುರಿತು ಪರಿಶೀಲಿಸುವ ಪ್ರಕ್ರಿಯೆಯು ಪ್ರಗತಿಯಲ್ಲಿದೆ. |

**ಇಪಿ 101 ಪಿಎಂಎ 2024**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು